# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2022-23 ನೇ ಸಾಲಿಗೆ ಮತ್ಸ್ಯಾಶ್ರಯ ಯೋಜನೆಯಡಿ ಮಂಜೂರಾದ 5000 ಮನೆಗಳಲ್ಲಿ ವಿವಿಧ ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಿ ಉಳಿದ 957 ಮನೆಗಳಲ್ಲಿ 197 ಮನೆಗಳನ್ನು ಉಡುಪಿ ಮತ್ತು ಮಂಗಳೂರು ವಿಧಾನಸಭಾ ಕ್ಷೇತ್ರವಾರು ಮರುಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ 99/ಮೀಇಯೋ/2022, ದಿನಾಂಕ: 07-04-2022.
2. ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ 99/ ಮೀಇಯೋ/2022, ದಿನಾಂಕ: 03-11-2022.
3. ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ 99/ ಮೀಇಯೋ/2022, ದಿನಾಂಕ: 04-02-2023.
4. ಸರ್ಕಾರದ ಆದೇಶ ಸಂಖ್ಯೆ:ಪಸಂಮೀ ಇ 99 ಮೀಇಯೋ 2023, ದಿನಾಂಕ:16.11.2023.
5. ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ 99/ಮೀಇಯೋ/2022, ದಿನಾಂಕ: 27-11-2022.
6. ಮಾನ್ಯ ಮೀನುಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ:ಮೀಬಂಒಜಸ/ ಆಕಾ/347/2023, ದಿನಾಂಕ: 30.12.2023

RMK 1/1/24

1/1/24

******

**<u>ಪ್ರಸ್ತಾವನೆ:</u>**

2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-63 ರಲ್ಲಿ ಪ್ರಸಕ್ತ ಸಾಲಿನಲ್ಲಿ 5000 ವಸತಿರಹಿತ ಮೀನುಗಾರರಿಗೆ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಆದ್ಯತೆ ಮೇರೆಗೆ ಮನೆಗಳನ್ನು ನಿರ್ಮಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಆದೇಶದಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-63 ರಂತೆ, ವಸತಿ ಇಲಾಖೆಯಡಿ ಹೊಸದಾಗಿ ಮಂಜೂರಾಗಿರುವ 5.00 ಲಕ್ಷ ಮನೆಗಳಲ್ಲಿ ಆದ್ಯತೆ ಮೇರೆಗೆ 5000 ವಸತಿರಹಿತ ಮೀನುಗಾರರಿಗೆ ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಜಾರಿಯಲ್ಲಿರುವ ಸಹಾಯಧನ ಮಾದರಿಯಂತೆ ಹಾಗೂ ನಿಗಮದ ಮಾನದಂಡಗಳನ್ನೊಳಗೊಂಡಂತೆ ಮನೆಗಳನ್ನು ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-63 ರಲ್ಲಿ ಘೋಷಿಸಲಾದಂತೆ ಆದೇಶ ದಿನಾಂಕ: 07-04-2022 ರಲ್ಲಿ ವಸತಿರಹಿತ ಮೀನುಗಾರರಿಗೆ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ 5000 ಮನೆಗಳನ್ನು ನಿರ್ಮಿಸಲು

...2

ಆಡಳಿತಾತ್ಮಕ ಅನುಮೋದನೆ ನೀಡಿರುವುದನ್ನು ಭಾಗಶಃ ಮಾರ್ಪಡಿಸಿ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ಇದರ ಮೂಲಕ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಮುಂದುವರೆದು, ಸದರಿ 5000 ಮನೆಗಳ ಪೈಕಿ 4053 ಮನೆಗಳನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ಇವರ ಮೂಲಕ ಅನುಷ್ಠಾನಗೊಳಿಸಲು ಸದರಿ ಆದೇಶದ ಅನುಬಂಧದಲ್ಲಿ ನಮೂದಿಸಿರುವಂತೆ ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಆದೇಶದಲ್ಲಿ 2022-23 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ 5000 ಮನೆಗಳಲ್ಲಿ 4053 ಮನೆಗಳನ್ನು ಹಂಚಿಕೆ ಮಾಡಿ ಬಾಕಿ ಉಳಿದ 947 ಮನೆಗಳ ಪೈಕಿ 702 ಮನೆಗಳನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ಇವರ ಮೂಲಕ ಅನುಷ್ಠಾನಗೊಳಿಸಲು ಸದರಿ ಆದೇಶದ ಅನುಬಂಧದಲ್ಲಿ ನಮೂದಿಸಿರುವಂತೆ ವಿವಿಧ ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ಆದೇಶದಲ್ಲಿ 2022-23 ನೇ ಸಾಲಿಗೆ ಮತ್ಸ್ಯಾಶ್ರಯ ಯೋಜನೆಯಡಿ ವಿವಿಧ ವಿಧಾನಸಭಾ ಕ್ಷೇತ್ರವಾರು ಹಂಚಿಕೆಯಾದ 4720 ಮನೆಗಳ ಪೈಕಿ ಮನೆ ನಿರ್ಮಾಣ ಮಾಡಲು ಅನುಮೋದನೆ ನೀಡಿರುವ 2147 ಮನೆಗಳನ್ನು ಹೊರತುಪಡಿಸಿ ಉಳಿದ 2573 ಮನೆಗಳನ್ನು ಹಿಂಪಡೆದು ಹಾಗೂ ಇನ್ನೂ ಹಂಚಿಕೆಗೆ ಬಾಕಿ ಇದ್ದ 48 ಮನೆಗಳನ್ನು ಸೇರಿಸಿ ಒಟ್ಟಾರೆ 2621 ಮನೆಗಳಲ್ಲಿ 1539 ಮನೆಗಳನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ಇವರ ಮೂಲಕ ಅನುಷ್ಠಾನಗೊಳಿಸಲು ಸದರಿ ಆದೇಶದ ಅನುಬಂಧದಲ್ಲಿ ನಮೂದಿಸಿರುವಂತೆ ವಿಧಾನಸಭಾ ಕ್ಷೇತ್ರವಾರು ಮರುಹಂಚಿಕೆ ಮಾಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2022-23 ನೇ ಸಾಲಿಗೆ ಮತ್ಸ್ಯಾಶ್ರಯ ಯೋಜನೆಯಡಿ ಮಂಜೂರಾದ 5000 ಮನೆಗಳಲ್ಲಿ ವಿವಿಧ ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಿ ಉಳಿದ 1082 ಮನೆಗಳಲ್ಲಿ 125 ಮನೆಗಳನ್ನು ವಿಧಾನಸಭಾ ಕ್ಷೇತ್ರವಾರು ಮರುಹಂಚಿಕೆ ಮಾಡಿ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ಇವರ ಮೂಲಕ ಅನುಷ್ಠಾನಗೊಳಿಸಲು ಆದೇಶ ಹೊರಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿಯವರ ಟಿಪ್ಪಣಿಯಲ್ಲಿ ಮತ್ಸ್ಯಾಶ್ರಯ ಯೋಜನೆ ಅಡಿಯಲ್ಲಿ ಉಡುಪಿ ವಿಧಾನಸಭಾ ಕ್ಷೇತ್ರಕ್ಕೆ 97 ಮನೆಗಳು ಮತ್ತು ಮಂಗಳೂರು ವಿಧಾನಸಭಾ ಕ್ಷೇತ್ರಕ್ಕೆ 100 ಮನೆಗಳನ್ನು ಹಂಚಿಕೆ ಮಾಡಿ ಆದೇಶ ಹೊರಡಿಸುವಂತೆ ಸೂಚಿಸಿರುತ್ತಾರೆ.

ಮೇಲಿನ ಅಂಶಗಳ ವಿವರಣೆ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಪಸಂಮೀ ಇ-99 ಮೀಇಯೋ 2022, ಬೆಂಗಳೂರು**

**ದಿನಾಂಕ:01-01-2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23 ನೇ ಸಾಲಿಗೆ ಮತ್ಸ್ಯಾಶ್ರಯ ಯೋಜನೆಯಡಿ ಮಂಜೂರಾದ 5000 ಮನೆಗಳಲ್ಲಿ ವಿವಿಧ ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಿ ಉಳಿದ 957 ಮನೆಗಳಲ್ಲಿ 197 ಮನೆಗಳನ್ನು ಕೆಳಕಂಡ ವಿಧಾನಸಭಾ ಕ್ಷೇತ್ರವಾರು ಮರುಹಂಚಿಕೆ ಮಾಡಿ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ, ಮಂಗಳೂರು ಇವರ ಮೂಲಕ ಅನುಷ್ಠಾನಗೊಳಿಸಲು ಆದೇಶಿಸಿದೆ.

| ಕ್ರ.ಸಂ | ಜಿಲ್ಲೆ | ವಿಧಾನಸಭಾ ಕ್ಷೇತ್ರ | ಹಂಚಿಕೆ ಮಾಡಲಾದ ಮನೆಗಳ ಸಂಖ್ಯೆ |
|---|---|---|---|
| 1. | ಉಡುಪಿ | ಉಡುಪಿ | 97 |
| 2. | ದಕ್ಷಿಣ ಕನ್ನಡ | ಮಂಗಳೂರು | 100 |
| | | **ಒಟ್ಟು** | **197** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

K.S. Chinnubai 1/1/2024
**(ಚಿನ್ನೂಬಾಯಿ.ಕೆ.ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

01/01/2024

**ಇವರಿಗೆ**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಉಡುಪಿ & ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
5. ಉಡುಪಿ & ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6. ಮೀನುಗಾರಿಕೆ ನಿರ್ದೇಶಕರು, ಮೀನುಗಾರಿಕೆ ನಿರ್ದೇಶನಾಲಯ, ವಿ.ವಿ.ಟವರ್, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿ., ಹೊಯಿಗೆ ಬಜಾರ್, ಮಂಗಳೂರು.

8. ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
10. ಎಲ್ಲಾ ಮೀನುಗಾರಿಕೆ ಜಂಟಿ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
11. ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
13. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
14. ಕಂಟ್ರೋಲ್ ರೂಮ್-ಕಂ-24x7 ಹೆಲ್ಪ್ ಲೈನ್ (ಸಹಾಯವಾಣಿ), ಮೀನುಗಾರಿಕೆ ಇಲಾಖೆ.
15. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.
16. http://ahf.karnataka.gov.in

**ಪ್ರತಿಯನ್ನು**

1. ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು / ಅಪರ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು, ಪಸಂಮೀ ಇಲಾಖೆ, ವಿಕಾಸಸೌಧ, ಬೆಂಗಳೂರು.